All India Radio: Bangalore
National Bulletin In Kannada
13.04.2026 19.35 hrs
ಆಕಾಶವಾಣಿ, ಬೆಂಗಳೂರು

# ರಾಷ್ಟ್ರೀಯ ವಾರ್ತೆಗಳು

13.04.2026 19.35 hrs

***************

ಮುಖ್ಯಾಂಶಗಳು

- ನಾರಿ ಶಕ್ತಿ ವಂದನ ಸಮ್ಮೇಳನ; ಮಹಿಳಾ ಸಬಲೀಕರಣದ ಹೊಸ ಯುಗಕ್ಕೆ ಪ್ರಧಾನಿ ನರೇಂದ್ರ ಮೋದಿ ಕರೆ
- ದೇಶಾದ್ಯಂತ ಅಡುಗೆ ಅನಿಲ ಪೂರೈಕೆ ಸಹಜ; ವಿದ್ಯುತ್ ಚಾಲಿತ ವಾಹನಗಳಿಗೆ ಸಬ್ಸಿಡಿ ವಿಸ್ತರಣೆ
- ಪಶ್ಚಿಮ ಬಂಗಾಳ, ತಮಿಳುನಾಡು ವಿಧಾನಸಭೆ ಚುನಾವಣೆ; ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ ಕಾರ್ಯ
- ನಿನ್ನೆ ನಿಧನರಾದ ಸ್ವರ ಸಾಮ್ರಾಜ್ಞಿ ಆಶಾ ಭೋಸ್ಲೆ ಪಾರ್ಥಿವ ಶರೀರಕ್ಕೆ ಮುಂಬೈನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತಿಮ ವಿದಾಯ
- ಐಪಿಎಲ್ ಟಿ-೨೦ ಕ್ರಿಕೆಟ್; ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ಫೀಲ್ಡಿಂಗ್ ಆಯ್ಕೆ

***************

ಭಾರತದ ನಾರಿ ಶಕ್ತಿಯು ಇಂದು ತನ್ನ ಕಠಿಣ ಪರಿಶ್ರಮ ಮತ್ತು ಆತ್ಮವಿಶ್ವಾಸದ ಮೂಲಕ ಹೊಸ ಎತ್ತರ ತಲುಪಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಆಯೋಜಿಸಲಾಗಿದ್ದ 'ನಾರಿ ಶಕ್ತಿ ವಂದನ ಸಮ್ಮೇಳನ'ವನ್ನು ಉದ್ದೇಶಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ಮೂಲಕ ಅವರನ್ನು ಸಬಲೀಕರಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ಕರೆ ನೀಡಿದರು.

೨೧ನೇ ಶತಮಾನದ ಐತಿಹಾಸಿಕ ನಿರ್ಧಾರಗಳಲ್ಲಿ ಒಂದಾದ 'ನಾರಿ ಶಕ್ತಿ ವಂದನ ಅಧಿನಿಯಮ'ವು ಮಹಿಳಾ ಸಬಲೀಕರಣಕ್ಕೆ ಹೊಸ ಭಾಷ್ಯ ಬರೆಯಲಿದ್ದು, ಈ ತಿಂಗಳ ೧೬ ರಿಂದ ೧೮ ರವರೆಗೆ ನಡೆಯಲಿರುವ ವಿಶೇಷ ಅಧಿವೇಶನದ ವೇಳೆ ಸಂಸತ್ತು ಒಂದು ನೂತನ ಇತಿಹಾಸವನ್ನು ಸೃಷ್ಟಿಸಲು ಸಜ್ಜಾಗಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಹಿಳೆಯರ ಮೀಸಲಾತಿ ಮತ್ತು ಸಕ್ರಿಯ ಭಾಗವಹಿಸುವಿಕೆಯು ದೇಶದ ಅಡಿಪಾಯವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ ಎಂದ ಪ್ರಧಾನಿ, ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಇಂದು ೧೪ ಲಕ್ಷಕ್ಕೂ ಅಧಿಕ ಮಹಿಳೆಯರು ನಾಯಕತ್ವ ವಹಿಸಿರುವುದು ಮಹಿಳಾ ಸಬಲೀಕರಣಕ್ಕೆ ಸಾಕ್ಷಿಯಾಗಿದೆ. ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಹೆಚ್ಚಾದಾಗ ವ್ಯವಸ್ಥೆಯಲ್ಲಿ ಹೆಚ್ಚಿನ ಸಂವೇದನಾಶೀಲತೆ ಮತ್ತು ದಕ್ಷತೆ ಮೂಡುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವೆ ಅನ್ನಪೂರ್ಣ ದೇವಿ, ಪ್ರಧಾನಮಂತ್ರಿಯವರ ದೃಢ ಸಂಕಲ್ಪದಿಂದಾಗಿ ಇಂದು ದೇಶದ ಹೆಣ್ಣುಮಕ್ಕಳು ಅಭಿವೃದ್ಧಿಯ ಪಯಣದಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದರು.

ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮಾತನಾಡಿ, ಕೇಂದ್ರದ ಯೋಜನೆಗಳು ಮಹಿಳೆಯರನ್ನು ಕುಟುಂಬದ ಕೇಂದ್ರಬಿಂದುವನ್ನಾಗಿರಿಸಿ ರೂಪಿತವಾಗಿದ್ದು, ಜನ ಧನ್ ಖಾತೆಗಳ ಮೂಲಕ ಅವರನ್ನು ರಾಷ್ಟ್ರದ ಮುಖ್ಯವಾಹಿನಿಗೆ ಜೋಡಿಸಲಾಗುತ್ತಿದೆ ಎಂದು ಶ್ಲಾಘಿಸಿದರು.

***************

ದೇಶದ ಮನೆ ಬಳಕೆಯ ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಿಲ್ಲ ಹಾಗೂ ಎಲ್ಲಾ ವಿತರಕರಲ್ಲಿ ಸಾಕಷ್ಟು ದಾಸ್ತಾನು ಇದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಅಂತರ್ ಸಚಿವಾಲಯ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಡುಗೆ ಅನಿಲ ದುರ್ಬಳಕೆ ತಡೆಯಲು ಒಟಿಪಿ ಆಧಾರಿತ ವಿತರಣಾ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುತ್ತಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದ ಪೂರೈಕೆ ಸರಪಳಿಗೆ ತೊಂದರೆಯಾಗದಂತೆ ಸರ್ಕಾರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದು, ವಾಣಿಜ್ಯ ಬಳಕೆಯ ಅನಿಲ ಪೂರೈಕೆ ಶೇಕಡ ೭೦ರಷ್ಟು ಪುನರ್ ಸ್ಥಾಪನೆಯಾಗಿದೆ ಎಂದು ತಿಳಿಸಿದೆ.

ಇದೇ ವೇಳೆ ಮಾತನಾಡಿದ ಬೃಹತ್ ಕೈಗಾರಿಕಾ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಡಾ.ಹನೀಫ್ ಖುರೇಷಿ, ಪರಿಸರ ಸ್ನೇಹಿ ಸಾರಿಗೆಗೆ ಉತ್ತೇಜನ ನೀಡುವ ಪಿಎಂ ಇ-ಡ್ರೈವ್ ಯೋಜನೆಯಡಿ ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳಿಗೆ ನೀಡಲಾಗುವ ಸಬ್ಸಿಡಿಯನ್ನು ೨೦೨೮ರ ಮಾರ್ಚ್‌ವರೆಗೆ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

ಬಂದರು ಹಡಗು ಮತ್ತು ಜಲಮಾರ್ಗಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಮುಕೇಶ್ ಮಂಗಲ್ ಮಾತನಾಡಿ, ಪರ್ಷಿಯನ್ ಗಲ್ಫ್ ಪ್ರದೇಶದಲ್ಲಿರುವ ಎಲ್ಲಾ ಭಾರತೀಯ ನಾಗರಿಕರು ಸುರಕ್ಷಿತವಾಗಿದ್ದು, ೨೦ ಸಾವಿರದ ೪೦೦ ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತ ಜಗ್ ವಿಕ್ರಮ್ ಹಡಗು ನಾಳೆ ಗುಜರಾತ್‌ನಲ್ಲಿರುವ ಕಾಂಡ್ಲಾ ಬಂದರನ್ನು ತಲುಪುವ ನಿರೀಕ್ಷೆ ಇದೆ. ಕಳೆದ ೨೪ ಗಂಟೆಗಳಲ್ಲಿ ಭಾರತೀಯ ಧ್ವಜ ಹೊಂದಿರುವ ಹಡಗುಗಳಿಗೆ ಯಾವುದೇ ತೊಂದರೆಯಾದ ವರದಿಯಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಅಮೆರಿಕಾ ನೇತೃತ್ವದಲ್ಲಿ ಹೊರ್ಮುಜ್ ಜಲಸಂಧಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಯಾವುದೇ ನೌಕಾ ದಿಗ್ಬಂಧನದಲ್ಲಿ ಬ್ರಿಟನ್ ಭಾಗವಹಿಸುವುದಿಲ್ಲ ಎಂದು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಸ್ಪಷ್ಟಪಡಿಸಿದ್ದಾರೆ.

ಇರಾನ್ ವಿರುದ್ಧದ ಸಂಘರ್ಷಕ್ಕೆ ಲಂಡನ್ ಅನ್ನು ಎಳೆತರಲು ತಾವು ಬಯಸುವುದಿಲ್ಲ ಎಂದು ಹೇಳಿರುವ ಅವರು, ಉದ್ವಿಗ್ನತೆಯನ್ನು ಹೆಚ್ಚಿಸದೆ ಅಂತಾರಾಷ್ಟ್ರೀಯ ಹಡಗು ಸಂಚಾರ ಮಾರ್ಗಗಳನ್ನು ಮುಕ್ತವಾಗಿರಿಸಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಮತ್ತೊಂದೆಡೆ, ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಮುಕ್ತ ನೌಕಾಯಾನಕ್ಕೆ ಬೆಂಬಲ ಸೂಚಿಸಿದ್ದು, ಈ ದಿಗ್ಬಂಧನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅಮೆರಿಕದಿಂದ ತಮಗೆ ಯಾವುದೇ ವಿನಂತಿ ಬಂದಿಲ್ಲ ಎಂದಿದ್ದಾರೆ. ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯನ್ ಅವರು ಮಾತನಾಡಿ, ಜಲಸಂಧಿಯ ಸಂಚಾರಕ್ಕೆ ತಡೆಯುಂಟಾಗಿರುವುದು ಜಾಗತಿಕ ಇಂಧನ ಮಾರುಕಟ್ಟೆ ಮತ್ತು ಯುರೋಪಿನ ಆರ್ಥಿಕತೆಗೆ ದೊಡ್ಡ ಬೆದರಿಕೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಅಮೆರಿಕದ ದಿಗ್ಬಂಧನಕ್ಕೆ ಪ್ರತಿಯಾಗಿ ಇರಾನ್ ಸಶಸ್ತ್ರ ಪಡೆಗಳು ಕಠಿಣ ಎಚ್ಚರಿಕೆ ನೀಡಿವೆ. ಇರಾನ್ ಮತ್ತು ಅಮೆರಿಕ ನಡುವಿನ ಮಾತುಕತೆಗಳು ಸ್ಥಗಿತಗೊಂಡಿರುವುದು ಪಶ್ಚಿಮ ಏಷ್ಯಾದಲ್ಲಿ ಯುದ್ಧದ ಆತಂಕವನ್ನು ಹೆಚ್ಚಿಸಿದ್ದು, ಅಂತಾರಾಷ್ಟ್ರೀಯ ಸಮುದಾಯ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ.

***************

ಪಶ್ಚಿಮ ಬಂಗಾಳ ಮತ್ತು ತಮಿಳುನಾಡು ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜಕೀಯ ಕಣ ಕಳೆಗಟ್ಟಿದ್ದು, ಪ್ರಚಾರ ಕಾರ್ಯ ಭರದಿಂದ ಸಾಗಿದೆ.

ಪಶ್ಚಿಮ ಬಂಗಾಳದಲ್ಲಿ ವಿವಿಧ ಪಕ್ಷಗಳ ತಾರಾ ಪ್ರಚಾರಕರು ಸರಣಿ ಸಭೆಗಳು, ಬೃಹತ್ ರ‍್ಯಾಲಿಗಳು ಮತ್ತು ಸಾರ್ವಜನಿಕ ಸಮಾವೇಶಗಳನ್ನು ನಡೆಸುವ ಮೂಲಕ ಮತದಾರರನ್ನು ಸೆಳೆಯಲು ಪ್ರಯತ್ನಿಸುತ್ತಿದ್ದಾರೆ.

ಕೇಂದ್ರ ಗೃಹ ಸಚಿವ ಹಾಗೂ ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಅವರು ಪಶ್ಚಿಮ ಬಂಗಾಳದಲ್ಲಿಂದು ವಿವಿಧ ಕಡೆಗಳಲ್ಲಿ ಚುನಾವಣಾ ಪ್ರಚಾರ ಕೈಗೊಂಡರು. ಬೀರ್ ಭುಮ್‌ನಲ್ಲಿ ಎನ್‌ಡಿಎ ಅಭ್ಯರ್ಥಿ ಪರ ಪ್ರಚಾರ ನಡೆಸಿ ಜನತಾ ಸಮಾವೇಶ ಉದ್ದೇಶಿಸಿ ಅವರು, ಪಶ್ಚಿಮ ಬಂಗಾಳದಲ್ಲಿರುವ ಹಾಲಿ ಸರ್ಕಾರ ಭ್ರಷ್ಟಾಚಾರದಲ್ಲಿ ತೊಡಗಿದೆ. ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದರು.

ಪಶ್ಚಿಮ ಬಂಗಾಳದ ಬೀರ್ ಭುಮ್ ಜಿಲ್ಲೆಯ ಸುರಿನಲ್ಲಿ ತೃಣಮೂಲ ಕಾಂಗ್ರೆಸ್ ನಾಯಕಿ ಹಾಗೂ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡರು.

ರಾಜ್ಯದ ಸಂಸ್ಕೃತಿ ಮತ್ತು ಅಸ್ಮಿತೆಯನ್ನು ಕಾಪಾಡಲು ಟಿ.ಎಂ.ಸಿ ಬದ್ಧವಾಗಿದೆ ಎಂದು ಮತದಾರರಿಗೆ ಅವರು ಭರವಸೆ ನೀಡಿದರು. ಇನ್ನು ಸಿಪಿಐ-ಎಂ ಮತ್ತು ಕಾಂಗ್ರೆಸ್ ಅಭ್ಯರ್ಥಿಗಳು ಸಹ ಮನೆ-ಮನೆಗೆ ತೆರಳಿ ಪ್ರಚಾರ ನಡೆಸಿದರು.

***************

ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು 'ಮೇರಾ ಬೂತ್ ಸಬ್‌ಸೆ ಮಜಬೂತ್' ಸಂವಾದ ಕಾರ್ಯಕ್ರಮದಡಿ ತಮಿಳುನಾಡಿನ ಪಕ್ಷದ ಕಾರ್ಯಕರ್ತರೊಂದಿಗೆ 'ನಮೋ ಆಪ್' ಮೂಲಕ ಸಂವಾದ ನಡೆಸಿದರು. ಈ ವೇಳೆ ಮಾತನಾಡಿದ ಅವರು, ತಮಿಳುನಾಡಿನ ಜನರಲ್ಲಿ ಹೊಸ ಉತ್ಸಾಹದ ವಾತಾವರಣ ಮನೆಮಾಡಿದ್ದು, ರಾಜ್ಯದಲ್ಲಿ ಬದಲಾವಣೆ ತರಲು ಅವರು ಬಿಜೆಪಿ ಮತ್ತು ಎನ್‌ಡಿಎ ಮೈತ್ರಿಕೂಟವನ್ನು ಆಶಾಭಾವನೆಯಿಂದ ನೋಡುತ್ತಿರುವುದಾಗಿ ತಿಳಿಸಿದರು.

ರೈತರ ಕಲ್ಯಾಣವೇ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದರು.

***************

ಪಶ್ಚಿಮ ಬಂಗಾಳದಲ್ಲಿ ನಡೆದ ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ಮತದಾರರ ಪಟ್ಟಿಯಿಂದ ಹೆಸರುಗಳನ್ನು ಕೈಬಿಟ್ಟಿರುವುದನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ವಿಚಾರಣೆಗೆತ್ತಿಕೊಳ್ಳಲು ಸುಪ್ರೀಂ ಕೋರ್ಟ್ ಇಂದು ನಿರಾಕರಿಸಿದೆ. ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು, ಅರ್ಜಿದಾರರು ಈ ಕುರಿತು ರಚಿಸಲಾಗಿರುವ ನಿಯೋಜಿತ ಮೇಲ್ಮನವಿ ನ್ಯಾಯಾಧಿಕರಣಗಳನ್ನು ಸಂಪರ್ಕಿಸುವಂತೆ ಸೂಚಿಸಿದೆ.

ಸದ್ಯ ಸುಮಾರು ೩೦ ರಿಂದ ೩೪ ಲಕ್ಷ ಮೇಲ್ಮನವಿಗಳು ಬಾಕಿ ಉಳಿದಿದ್ದು, ಪ್ರತಿಯೊಂದು ನ್ಯಾಯಾಧಿಕರಣ ಒಂದು ಲಕ್ಷಕ್ಕೂ ಹೆಚ್ಚು ಪ್ರಕರಣಗಳನ್ನು ನಿರ್ವಹಿಸುತ್ತಿದೆ ಎಂದು ಸುಪ್ರೀಂ ಕೋರ್ಟ್ ಗಮನಿಸಿದೆ. ಇಂತಹ ಸಂದರ್ಭದಲ್ಲಿ ನಿಗದಿತ ಪ್ರಕ್ರಿಯೆಯನ್ನು ಅನುಸರಿಸುವುದು ಕಡ್ಡಾಯವಾಗಿದ್ದು, ಈ ಹಂತದಲ್ಲಿ ನ್ಯಾಯಾಂಗವು ಹಸ್ತಕ್ಷೇಪ ಮಾಡಿದರೆ ಅದು ಒಟ್ಟಾರೆ ಚುನಾವಣಾ ಪ್ರಕ್ರಿಯೆಗೆ ಅಡ್ಡಿಯಾಗಬಹುದು ಎಂದು ನ್ಯಾಯಪೀಠ ಎಚ್ಚರಿಸಿದೆ.

***************

ಚುನಾವಣಾ ಅಕ್ರಮಗಳನ್ನು ತಡೆಗಟ್ಟಲು ಮತದಾನ ಕೇಂದ್ರಗಳಲ್ಲಿ ಬೆರಳಚ್ಚು ಮತ್ತು ಕಣ್ಣಿನ ಆಧಾರಿತ ಬಯೋಮೆಟ್ರಿಕ್ ಗುರುತಿನ ವ್ಯವಸ್ಥೆಯನ್ನು ಜಾರಿಗೆ ತರಲು ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಇಂದು ಕೇಂದ್ರ ಸರ್ಕಾರ ಮತ್ತು ಕೇಂದ್ರ ಚುನಾವಣಾ ಆಯೋಗಕ್ಕೆ ನೋಟಿಸ್ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ಜೋಯ್ ಮಲ್ಯ ಬಾಗ್ಚಿ ಅವರಿದ್ದ ಪೀಠ ಈ ಆದೇಶ ಹೊರಡಿಸಿದೆ.

***************

ನಿನ್ನೆ ನಿಧನರಾದ ಖ್ಯಾತ ಗಾಯಕಿ ಆಶಾ ಭೋಸ್ಲೆ ಅವರ ಅಂತ್ಯಕ್ರಿಯೆ ಮುಂಬೈನ ಶಿವಾಜಿ ಪಾರ್ಕ್ ಚಿತಾಗಾರದಲ್ಲಿ ಇಂದು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು. ಈ ವೇಳೆ ಸಾವಿರಾರು ಅಭಿಮಾನಿಗಳು ಆಶಾ ಭೋಸ್ಲೆ ಅವರಿಗೆ ಅಂತಿಮ ವಿದಾಯ ಸಲ್ಲಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಕಳುಹಿಸಿಕೊಟ್ಟ ಪುಷ್ಪಗುಚ್ಛವನ್ನು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮೃತರ ಪಾರ್ಥಿವ ಶರೀರದ ಮೇಲೆ ಇರಿಸಿ, ಗೌರವ ನಮನ ಸಲ್ಲಿಸಿದರು. ಅಂತ್ಯಕ್ರಿಯೆಯ ವೇಳೆ ಚಿತ್ರರಂಗದ ಹಲವು ಗಣ್ಯರು ಉಪಸ್ಥಿತರಿದ್ದರು.

***************

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ಮತ್ತು ರಾಜಸ್ಥಾನ ರಾಯಲ್ಸ್ ತಂಡ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*******ಮುಕ್ತಾಯ*******